**ಜಪಾನ್ ಮತ್ತು ಚೀನಾ ಭೇಟಿಗೂ ಮುನ್ನ ಪ್ರಧಾನಮಂತ್ರಿಯವರ ನಿರ್ಗಮನ ಹೇಳಿಕೆ**

ಆಗಸ್ಟ್ 28, 2025

ಪ್ರಧಾನಮಂತ್ರಿ ಶಿಗೇರು ಇಶಿಬಾ ಅವರ ಆಹ್ವಾನದ ಮೇರೆಗೆ, ನಾನು 15 ನೇ ವಾರ್ಷಿಕ ಶೃಂಗಸಭೆಗಾಗಿ ಜಪಾನ್‌ಗೆ ಎರಡು ದಿನಗಳ ಭೇಟಿಯನ್ನು ಪ್ರಾರಂಭಿಸುತ್ತಿದ್ದೇನೆ.

2. ಈ ಭೇಟಿಯ ಸಮಯದಲ್ಲಿ, ಕಳೆದ ಹನ್ನೊಂದು ವರ್ಷಗಳಲ್ಲಿ ಸ್ಥಿರ ಮತ್ತು ಗಮನಾರ್ಹ ಪ್ರಗತಿಯನ್ನು ಸಾಧಿಸಿದ ನಮ್ಮ ವಿಶೇಷ ಕಾರ್ಯತಂತ್ರ ಮತ್ತು ಜಾಗತಿಕ ಪಾಲುದಾರಿಕೆಯ ಮುಂದಿನ ಹಂತವನ್ನು ರೂಪಿಸುವತ್ತ ನಾವು ಗಮನ ಹರಿಸುತ್ತೇವೆ. ನಮ್ಮ ಸಹಯೋಗಕ್ಕೆ ಹೊಸ ರೆಕ್ಕೆಗಳನ್ನು ನೀಡಲು, ನಮ್ಮ ಆರ್ಥಿಕ ಮತ್ತು ಹೂಡಿಕೆ ಸಂಬಂಧಗಳ ವ್ಯಾಪ್ತಿ ಮತ್ತು ಮಹತ್ವಾಕಾಂಕ್ಷೆಯನ್ನು ವಿಸ್ತರಿಸಲು ಮತ್ತು AI ಮತ್ತು ಸೆಮಿಕಂಡಕ್ಟರ್‌ಗಳನ್ನು ಒಳಗೊಂಡಂತೆ ಹೊಸ ಮತ್ತು ಉದಯೋನ್ಮುಖ ತಂತ್ರಜ್ಞಾನಗಳಲ್ಲಿ ಸಹಕಾರವನ್ನು ಮುಂದಕ್ಕೆ ಕೊಂಡೊಯ್ಯಲು ನಾವು ಪ್ರಯತ್ನಿಸುತ್ತೇವೆ. ಈ ಭೇಟಿಯು ನಮ್ಮ ಜನರನ್ನು ಸಂಪರ್ಕಿಸುವ ನಾಗರಿಕತೆಯ ಬಂಧಗಳು ಮತ್ತು ಸಾಂಸ್ಕೃತಿಕ ಸಂಬಂಧಗಳನ್ನು ಬಲಪಡಿಸುವ ಅವಕಾಶವಾಗಿದೆ.

3. ಜಪಾನ್‌ನಿಂದ, ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರ ಆಹ್ವಾನದ ಮೇರೆಗೆ ಟಿಯಾಂಜಿನ್‌ನಲ್ಲಿ ನಡೆಯಲಿರುವ ಶಾಂಘೈ ಸಹಕಾರ ಸಂಸ್ಥೆ ಶೃಂಗಸಭೆಗೆ ಹಾಜರಾಗಲು ನಾನು ಚೀನಾಕ್ಕೆ ಪ್ರಯಾಣಿಸುತ್ತೇನೆ. ಭಾರತವು SCO ದ ಸಕ್ರಿಯ ಮತ್ತು ರಚನಾತ್ಮಕ ಸದಸ್ಯನಾಗಿದೆ. ನಮ್ಮ ಅಧ್ಯಕ್ಷತೆಯ ಅವಧಿಯಲ್ಲಿ, ನಾವು ಹೊಸ ಆಲೋಚನೆಗಳನ್ನು ಪರಿಚಯಿಸಿದ್ದೇವೆ ಮತ್ತು ನಾವೀನ್ಯತೆ, ಆರೋಗ್ಯ ಮತ್ತು ಸಾಂಸ್ಕೃತಿಕ ವಿನಿಮಯ ಕ್ಷೇತ್ರಗಳಲ್ಲಿ ಸಹಯೋಗವನ್ನು ಆರಂಭಿಸಿದ್ದೇವೆ. ಹಂಚಿಕೆಯ ಸವಾಲುಗಳನ್ನು ಪರಿಹರಿಸಲು ಮತ್ತು ಪ್ರಾದೇಶಿಕ ಸಹಕಾರವನ್ನು ಆಳಗೊಳಿಸಲು SCO ಸದಸ್ಯರೊಂದಿಗೆ ಕೆಲಸ ಮಾಡಲು ಭಾರತ ಬದ್ಧವಾಗಿದೆ. ಶೃಂಗಸಭೆಯ ಸಂದರ್ಭದಲ್ಲಿ ಅಧ್ಯಕ್ಷ ಕ್ಸಿ ಜಿನ್‌ಪಿಂಗ್, ಅಧ್ಯಕ್ಷ ಪುಟಿನ್ ಮತ್ತು ಇತರ ನಾಯಕರನ್ನು ಭೇಟಿ ಮಾಡಲು ನಾನು ಎದುರು ನೋಡುತ್ತಿದ್ದೇನೆ.

4. ಜಪಾನ್ ಮತ್ತು ಚೀನಾಗೆ ನನ್ನ ಭೇಟಿಗಳು ನಮ್ಮ ರಾಷ್ಟ್ರೀಯ ಹಿತಾಸಕ್ತಿಗಳು ಮತ್ತು ಆದ್ಯತೆಗಳನ್ನು ಹೆಚ್ಚಿಸುತ್ತವೆ ಮತ್ತು ಪ್ರಾದೇಶಿಕ ಮತ್ತು ಜಾಗತಿಕ ಶಾಂತಿ, ಭದ್ರತೆ ಮತ್ತು ಸುಸ್ಥಿರ ಅಭಿವೃದ್ಧಿಯನ್ನು ಮುನ್ನಡೆಸುವಲ್ಲಿ ಫಲಪ್ರದ ಸಹಕಾರವನ್ನು ನಿರ್ಮಿಸಲು ಕೊಡುಗೆ ನೀಡುತ್ತವೆ ಎಂಬ ವಿಶ್ವಾಸ ನನಗಿದೆ.

ನವ ದೆಹಲಿ

ಆಗಸ್ಟ್ 28, 2025